# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಯೋಜನೆ, ಸಮಾಜ ಕಲ್ಯಾಣ, ಶಿಕ್ಷಣ, ಕೃಷಿ, ಮೀನುಗಾರಿಕೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಬಾಕಿ ವೇತನ ವೆಚ್ಚಕ್ಕಾಗಿ ಹಾಗೂ ದಿನಗೂಲಿ/ಹೊರಗುತ್ತಿಗೆ ಸಿಬ್ಬಂದಿಯವರ ವೇತನ/ಸಂಭಾವನೆಗಾಗಿ ಮತ್ತು ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಯೋಜನೆ, ಸಮಾಜ ಕಲ್ಯಾಣ, ಶಿಕ್ಷಣ, ಕೃಷಿ, ಮೀನುಗಾರಿಕೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹಾಗೂ ದಿನಗೂಲಿ/ಹೊರಗುತ್ತಿಗೆ ಸಿಬ್ಬಂದಿಯವರುಗಳ ವೇತನ/ಸಂಭಾವನೆಗಾಗಿ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿಯ ಬಿಲ್ಲುಗಳ ತೀರುವಳಿಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2202, 2210, 2225, 2435, 2515 ಮತ್ತು 34515ಡಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ರೂ249.00ಲಕ್ಷ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ರೂ.479.03ಲಕ್ಷ ಒಟ್ಟು ರೂ.728.03ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ249.00ಲಕ್ಷಗಳನ್ನು ಶೀರ್ಷಿಕೆ 2515–00–196–1–05–300 ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ479.03ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–197–1–10–300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 35 ವೆಚ್ಚ 6/2021(ಇ) ದಿನಾಂಕ: 30ನೇ ಜನವರಿ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ728.03ಲಕ್ಷ (ರೂಪಾಯಿ ಏಳು ನೂರ ಇಪ್ಪತ್ತೆಂಟು ಲಕ್ಷದ ಮೂರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ–2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು/ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ–2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು–2ರವರಿಗೆ
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಸಮಾಜ ಕಲ್ಯಾಣ//ಕೃಷಿ/ಮೀನುಗಾರಿಕೆ/ಶಿಕ್ಷಣ/ಯೋಜನೆ/ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ

## ಸರ್ಕಾರದ ಆದೇಶ ಸಂಖ್ಯೆ: ಆಇ 35 ವೆಚ್ಚ 6/2021 ದಿನಾಂಕ:30.1.2021ಕ್ಕೆ ಅನುಬಂಧ

| ಕ್ರಸಂ. | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|---|---|---|
| 1 | 2 | 3 | 4 | 5 | 6 |
| 1 | ರಾಮನಗರ | 3451-00-101-0-26-005<br>2435-00-101-0-26-005<br>2435-00-101-0-26-033 | 4.11<br>56.32<br>3.81 | | 64.24 |
| 2 | ಚಿತ್ರದುರ್ಗ | 2059-00-101-0-26-005 | 11.00 | | 11.00 |
| 3 | ಕೊಡಗು | 2059-00-101-0-26-005 | 23.83 | | 23.83 |
| 4 | ಮಂಡ್ಯ | 2515-00-101-0-26-021 | 88.57 | | 88.57 |
| 5 | ಚಿಕ್ಕಮಗಳೂರು | 2515-00-101-0-26-005 | 10.23 | | 10.23 |
| 6 | ಕೋಲಾರ | 2405-00-101-0-26-005 | 5.11 | | 5.11 |
| 7 | ದಕ್ಷಿಣ ಕನ್ನಡ | 2515-00-101-0-28-005<br>3451-00-101-0-26-005 | 2.54<br>4.50 | | 7.04 |
| 8 | ಮೈಸೂರು | 2225-00-102-0-38-005<br>2225-00-102-0-45-005<br>2225-00-102-0-45-034 | 8.33<br>8.29<br>22.36 | | 38.98 |
| 9 | ಬಂಗಾರಪೇಟೆ | 2515-00-102-0-63-021 | | 100.00 | 100.00 |
| 10 | ಮಾಲೂರು | 2515-00-102-0-63-021<br>2225-00-101-0-61-005 | | 19.25<br>19.00 | 38.25 |
| 11 | ಕೋಲಾರ | 2225-00-103-0-74-005<br>2202-00-101-0-64-005<br>2515-00-102-0-61-090 | | 11.92<br>9.60<br>45.30 | 66.82 |
| 12 | ಭಟ್ಕಳ | 2515-00-102-0-61-005 | | 12.40 | 12.40 |
| 13 | ಮುಳಬಾಗಿಲು | 2515-00-103-0-74-005 | | 3.25 | 3.25 |
| 14 | ಶ್ರೀನಿವಾಸಪುರ | 2225-00-103-0-74-005 | | 3.25 | 3.25 |
| 15 | ಹೊನ್ನಾವರ | 2515-00-102-0-61-005 | | 30.00 | 30.00 |
| 16 | ಕಡೂರು | 2515-00-102-0-66-021<br>2515-00-102-0-61-090 | | 76.43<br>8.00 | 84.43 |
| 17 | ಬೇಲೂರು | 2202-00-101-0-64-005 | | 20.00 | 20.00 |
| 18 | ಜೋಯ್ಡಾ | 2210-00-101-0-62-005<br>2210-00-101-0-62-034 | | 3.63<br>28.93 | 32.56 |
| 19 | ಗಂಗಾವತಿ | 2515-00-102-0-61-005 | | 18.47 | 18.47 |
| 20 | ಜೋಯ್ಡಾ | 2515-00-102-0-63-021 | | 35.00 | 35.00 |
| 21 | ಬೆಳ್ತಂಗಡಿ | 2225-00-103-0-78-005 | | 2.17 | 2.17 |
| 22 | ಕುಮಟಾ | 2225-00-102-0-61-090 | | 19.00 | 19.00 |
| 23. | ಹಡಗಲಿ | 2202-00-101-0-64.005 | | 13.43 | 13.43 |
| | **ಒಟ್ಟು** | 1415709641 | **249.00** | **479.03** | **728.03** |

(X) = 1415736679   xxx = 1415737071
(XX) = 1415736979   xxxx = 1415738586